# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/204/2021-22 ದಿನಾಂಕ : 16-11-2021

## ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:12-11-2021 ರಂದು ವಾರ್ಡ್ ನಂ.196-ಅಂಜನಾಪುರ ವಾರ್ಡ್ ಕಛೇರಿಯ ಉದ್ಯಾನವನದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

## ಸಭೆಗೆ ಹಾಜರಾಗಿದ್ದವರ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಪ್ರಮೋದ್ ಕುಮಾರ್.ಎನ್.ಜಿ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ನರೇಂದ್ರ ಕುಮಾರ್.ಎ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 4 | ಶ್ರೀ ಯೋಗೇಶ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ರಮೇಶ್ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) | ಹಾಜರಿರುತ್ತಾರೆ. |
| 6 | ಶ್ರೀ ಕೃಷ್ಣ ನಾಯಕ್ | ಸಹಾಯಕ ಇಂಜಿನಿಯರ್ (ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ) | ಗೈರು ಹಾಜರಿರುತ್ತಾರೆ. |
| 7 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ. |
| 8 | ಶ್ರೀ ಸದಾನಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 9 | ಶ್ರೀ ಶ್ರೀನಿವಾಸ್ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 12 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಂಜನಾಪುರ ವಾರ್ಡ್ ಸಂಖ್ಯೆ.196ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಪ್ರಮೋದ್ ಕುಮಾರ್.ಎನ್.ಜಿ ರವರು ದಿನಾಂಕ: 12-11-2021 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ನರೇಂದ್ರ ಕುಮಾರ್.ಎ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಬೀದಿ ದೀಪಗಳ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿನ ರಾಯಲ್ ಪಾರ್ಕ್ ಬಡಾವಣೆಯಲ್ಲಿ ಹೊಸದಾಗಿ ಎಲ್.ಇ.ಡಿ ದೀಪಗಳನ್ನು ಅಳವಡಿಸಲು ಕೋರಿರುವಂತೆ ಮುಂದಿನ ವಾರ್ಡ್ ಸಮಿತಿ ಸಭೆಯು ನಡೆಯುವ ಸಮಯಕ್ಕೆ ಕಾಮಗಾರಿಯನ್ನು ಮುಕ್ತಾಯಗೊಳಿಸಲಾಗುವುದೆಂದು ತಿಳಿಸಲಾಗಿದೆ ಮತ್ತು ಅಲ್ಲಿಯ ತನಕ ಸದರಿ ಬಡಾವಣೆಯಲ್ಲಿ ಬೀದಿ ದೀಪಗಳನ್ನು ನಿಯಂತ್ರಿಸಲು ಸ್ವಿಚ್ ಅಳವಡಿಸಲು ಕೋರಿರುತ್ತಾರೆ.

ಪು.ತಿ.ನೋ 2ಕ್ಕೆ

Scanned with CamScanner

2. ಘನತ್ಯಾಜ್ಯ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯ ಹರಿನಗರ ಕ್ರಾಸ್ ಬಳಿಯ Scrap Yard ನಲ್ಲಿ ಪ್ರತಿ ದಿನ ಕೇಬಲ್‌ಗಳನ್ನು ಸುಡುತ್ತಿರುತ್ತಾರೆ. ಹರಿನಗರ ಮಸೀದಿ ಪಕ್ಕದ ಖಾಲಿ ನಿವೇಶನದಲ್ಲಿ ತ್ಯಾಜ್ಯವನ್ನು ಪ್ರತಿ ದಿನ ಸಾರ್ವಜನಿಕರು ಸುರಿಯುತ್ತಿದ್ದು ಇದ್ದು ತಡೆಯಲು ಕ್ರಮವಹಿಸಲು ಕೋರಿರುತ್ತಾರೆ. ಕೋವಿಡ್-19ರ ಲಾಕ್‌ಡೌನ್ ಮುಕ್ತಾಯಗೊಂಡ ಪ್ರಯುಕ್ತ ಪೌರಕಾರ್ಮಿಕರು ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿದ್ದು ವಾರ್ಡ್ ವ್ಯಾಪ್ತಿಯಲ್ಲಿ ಕಸದ ಸಂಗ್ರಹಣೆಯನ್ನು ಸಮರ್ಪಕವಾಗಿ ನಿರ್ವಹಿಸಲಾಗುವುದು ಮತ್ತು ಮುಂದಿನ ದಿನಗಳಲ್ಲಿ ಕೂಡ ಸಾರ್ವಜನಿಕರಿಗೆ ತೊಂದರೆಯಾಗದಂತೆ ಹಾಗೂ ಘನತ್ಯಾಜ್ಯ ನಿರ್ವಹಣೆಯಲ್ಲಿ ಯಾವುದೇ ದೂರು ಬಾರದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸಂಬಂಧಪಟ್ಟ ಅಧಿಕಾರಿಗಳು ತಿಳಿಸಿರುತ್ತಾರೆ.

3. ಉದ್ಯಾನವನ ನಿರ್ವಹಣೆ:-

ರಾಯಲ್ ಪಾರ್ಕ್ ಬಡಾವಣೆಯಲ್ಲಿನ ತ್ರಿಕೋಣ ಉದ್ಯಾನವನವನ್ನು ಅಭಿವೃದ್ಧಿ ಪಡಿಸಲು ಹಾಗೂ 6ನೇ ಅಡ್ಡ ರಸ್ತೆಯ ಪಾರ್ಕ್‌ನಲ್ಲಿ ಎರಡು ಗಜೀಬೋಗಳನ್ನು ಅಳವಡಿಸಲು ಕೋರಿರುತ್ತಾರೆ.

4. ಮಳೆ ನೀರುಗಾಲುವೆ ನಿರ್ವಹಣೆ:-

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಅಂಜನಾಪುರ ಕೆರೆ ಇಂದ ವೇಣುಗೋಪಾಲಸ್ವಾಮಿ ದೇವಸ್ಥಾನದ ವರೆಗೆ ಹಾದು ಹೋಗುವ ರಾಜಕಾಲುವೆಯಲ್ಲಿನ ಹೂಳು ಹಾಗೂ ಗಿಡ ಗಂಟಿಗಳನ್ನು ತೆರವುಗೊಳಿಸಲು ಕೋರಿರುತ್ತಾರೆ.

5. ಬೆಸ್ಕಾಂ ಇಲಾಖೆ:-

ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆಯಿಂದ ಅಂತರ್ಗತ ಕೇಬಲ್ ಅಳವಡಿಸಲು ರಸ್ತೆಯನ್ನು ಕೇವಲ ಪಿಟ್ ಅಗೆಯಬೇಕಾಗಿದ್ದು ಆದರೆ ರಸ್ತೆಯ ಉದ್ದಕ್ಕೂ ಸಹ ಅಗೆಯುತ್ತಿದ್ದು ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯಾಗುತ್ತಿರುವತ್ತದೆ ಆದ್ದರಿಂದ ಸದರಿ ರಸ್ತೆ ಅಗೆತಗಳನ್ನು ಮುಚ್ಚಿ ವೆಟ್ ಮಿಕ್ಸ್ ಅಳವಡಿಸಲು ಕೋರಿರುತ್ತಾರೆ.

6. ಕಾಮಗಾರಿ ಇಲಾಖೆ:-

ವಾರ್ಡ್ ವ್ಯಾಪ್ತಿಯಲ್ಲಿ ರಾಯಲ್ ಪಾರ್ಕ್ ಬಡಾವಣೆಯ 6ನೇ ಅಡ್ಡ ರಸ್ತೆ ಹಾಗೂ 1ನೇ ಮುಖ್ಯ ರಸ್ತೆಯಲ್ಲಿ ಪಾದಚಾರಿ ಮಾರ್ಗದಲ್ಲಿನ ಮಣ್ಣನ್ನು ತೆರವುಗೊಳಿಸಲು ಕೋರಿರುತ್ತಾರೆ. ಕೊತ್ತನೂರು ಮುಖ್ಯ ರಸ್ತೆಯಲ್ಲಿನ ಮಳೆ ನೀರು ಚರಂಡಿಯಲ್ಲಿನ ಹೂಳನ್ನು ತೆರವುಗೊಳಿಸಲು ಕೋರಿರುತ್ತಾರೆ.

7. ಪೋಲಿಸ್ ಇಲಾಖೆ:-

ರಾಯಲ್ ಪಾರ್ಕ್ ಬಡಾವಣೆಯಲ್ಲಿ ಅನಾದೇಯ ವ್ಯಾಕ್ತಿಗಳು ದ್ವಿಚಕ್ರ ವಾಹನದಲ್ಲಿ ವೀಲಿಂಗ್ ಮಾಡುತ್ತಿದ್ದು ಇದರಿಂದ ಅಪಘಾತವಾಗುವ ಸಂಭವವಿರುತ್ತದೆ ಹಾಗೂ ಕೆಲವು ದಿನಗಳಲ್ಲಿ ಟ್ಯಾಮರಿಂಡ್ ಟ್ರೀಯಲ್ಲಿ ರಾತ್ರಿ 11-12 ಗಂಟೆಯವರೆಗೂ ಹೆಚ್ಚು ಶಬ್ದದ ಧ್ವನಿ ವರ್ಧಕಗಳನ್ನು ಅಳವಡಿಸಿಕೊಂಡು ಕಾರ್ಯಕ್ರಮಗಳನ್ನು ನಡೆಸುತ್ತಿರುವುದರಿಂದ ಬಡಾವಣೆಯ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವು ಬಗ್ಗೆ ದೂರಿರುತ್ತಾರೆ.

8.ನೋಡಲ್ ಅಧಿಕಾರಿ:-

ಆದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಪ್ರಮೋದ್ ಕುಮಾರ್ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.196 ಅಂಜನಾಪುರ

-ಸಹಿ-
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.196 ಅಂಜನಾಪುರ

Scanned with CamScanner